## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಶಂಕರಚಾರಿ, ಅಧೀಕ್ಷಕ, ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಯಮಿತ ಇವರ ಅಮಾನತ್ತನ್ನು ತೆರವುಗೊಳಿಸಿ, ಸೇವೆಗೆ ಪುನರ್ ಸ್ಥಾಪಿಸುವ ಬಗ್ಗೆ – ಆದೇಶ.

ಓದಲಾಗಿದೆ.

1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 401 ಎಎಫ್ಎನ್ 2017, ದಿನಾಂಕ:02.11.2017
2. ಶ್ರೀ ಪ್ರಶಾಂತ್‌ಕುಮಾರ್, ಎಂ.ವಿ ಇವರ ಮನವಿ ದಿನಾಂಕ:01.12.2017 ಮತ್ತು 18.12.2017
3. ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಐ.ಡಿ.ಎಲ್. ಇವರ ಪತ್ರ ಸಂಖ್ಯೆ:KRIDL/ACCTS/FD/IQB/2017-18, Dated:27.01.2018.
4. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 506 ಜಿಪಅ 2017, ದಿನಾಂಕ:26.2.2018
5. ಶ್ರೀ ಶಂಕರಚಾರಿ, ಅಧೀಕ್ಷಕ ಇವರ ಮನವಿ ದಿನಾಂಕ:06.3.2018.
6. ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಐ.ಡಿ.ಎಲ್. ಇವರ ಪತ್ರ ಸಂಖ್ಯೆ:KRIDL/ಆಡಳಿತ/(ಇವಿ)/2018-19, ದಿ:18.5.2018

ಪ್ರಸ್ತಾವನೆ:-

ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ಸಂಸ್ಥೆಯಲ್ಲಿ 55.00 ಕೋಟಿ ರೂ.ಗಳನ್ನು ಮಂಗಳೂರಿನ ಇಂಡಿಯನ್ ಓವರ್‌ಸೀಸ್ ಬ್ಯಾಂಕ್, ಕುಳಾಯಿ ಶಾಖೆಯಲ್ಲಿ ಸ್ಥಿರ ಠೇವಣಿಯನ್ನಾಗಿ ಇರಿಸಲಾಗಿದ್ದು, ಸದರಿ ಮೊತ್ತವನ್ನು ಇಂಡಿಯನ್ ಓವರ್‌ಸೀಸ್ ಬ್ಯಾಂಕ್, ಕುಳಾಯಿ ಶಾಖೆಯ ಬ್ಯಾಂಕ್ ಸಿಬ್ಬಂದಿಗಳು ಖಾಸಗಿ ವ್ಯಕ್ತಿಗಳ ಜೊತೆ ಸೇರಿ ದುರುಪಯೋಗ ಪಡೆಸಿಕೊಂಡಿದ್ದು ಸದರಿ ಮೊತ್ತವನ್ನು ಬ್ಯಾಂಕಿನಲ್ಲಿ ಠೇವಣಿ ಇರಿಸುವ ಮೊದಲು ಹಣಕಾಸು ವ್ಯವಹಾರವನ್ನು ಸಮರ್ಪಕವಾಗಿ ನಿರ್ವಹಿಸದೇ ಹಾಗೂ ಸಂಸ್ಥೆಯ ಹಣ ದುರುಪಯೋಗವಾಗಲು ಕಾರಣರಾಗಿ ಗಂಭೀರ ಸ್ವರೂಪದ ಆರ್ಥಿಕ ಅಶಿಸ್ತು ಎಸಗಿರುವ ಕಾರಣಕ್ಕಾಗಿ ಈ ಕೆಳಕಂಡ ಅಧಿಕಾರಿ/ ನೌಕರರನ್ನು ಮೇಲೆ ಓದಲಾದ ಕ್ರಮಾಂಕ (1) ರ ದಿ:02.11.2017 ರ ಆದೇಶದಲ್ಲಿ ಸೇವೆಯಿಂದ ಅಮಾನತ್ತು ಪಡಿಸಲಾಗಿತ್ತು.

1. ಡಾ॥ ವೀರನಗೌಡ ಪಾಟೀಲ್, ಮುಖ್ಯ ಹಣಕಾಸು ಅಧಿಕಾರಿ
2. ಶ್ರೀ ಪ್ರಶಾಂತ್ ಕುಮಾರ್ ಎಂ.ವಿ, ಉಪ ಹಣಕಾಸು ಅಧಿಕಾರಿ
3. ಶ್ರೀ ಶಂಕರಚಾರಿ, ಅಧೀಕ್ಷಕರು.

ಶ್ರೀ ಎಂ.ವಿ.ಪ್ರಶಾಂತ್ ಕುಮಾರ್, ಉಪ ಹಣಕಾಸು ಅಧಿಕಾರಿ ಇವರು ಅಮಾನತ್ತು ಆದೇಶದ ವಿರುದ್ಧ ಮಾನ್ಯ ಕೆ.ಎ.ಟಿ.ಯಲ್ಲಿ ಅರ್ಜಿ ಸಂಖ್ಯೆ:6780/2017 ಸಲ್ಲಿಸಿದ್ದು ಮಾನ್ಯ ನ್ಯಾಯಮಂಡಳಿಯು ಸದರಿ ಅರ್ಜಿಗೆ ಸಂಬಂಧಿಸಿದಂತೆ ದಿ:12.12.2017 ರಂದು ನೀಡಿದ ಆದೇಶ ಹಾಗೂ ಸದರಿಯವರು ಸಲ್ಲಿಸಿದ್ದ ಮನವಿಯನ್ನು ಹಾಗೂ ಮೇಲೆ ಓದಲಾದ ಕ್ರಮಾಂಕ (3) ರಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಐ.ಡಿ.ಎಲ್ ಇವರು ಸಲ್ಲಿಸಿದ್ದ ವರದಿಯನ್ನು ಪರಿಗಣಿಸಿ, ಮೇಲೆ ಓದಲಾದ ಕ್ರಮಾಂಕ (4) ರ ದಿನಾಂಕ:26.2.2018 ರ ಆದೇಶದಲ್ಲಿ ಶ್ರೀ ಎಂ.ವಿ.ಪ್ರಶಾಂತ್ ಕುಮಾರ್ ಉಪ ಹಣಕಾಸು ಅಧಿಕಾರಿ ಮತ್ತು ಡಾ॥ ವೀರನಗೌಡ ಪಾಟೀಲ್, ಮುಖ್ಯ ಹಣಕಾಸು ಅಧಿಕಾರಿ ಇವರುಗಳ ವಿರುದ್ದದ ಆರೋಪಗಳಿಗೆ ಸಂಬಂಧಿಸಿದಂತೆ ಕೈಗೊಳ್ಳಬಹುದಾದ ಕ್ರಮಗಳನ್ನು ಬಾಕಿ ಇರಿಸಿ, ಅವರ ಅಮಾನತ್ತನ್ನು ತೆರವುಗೊಳಿಸಿ, ಸೇವೆಗೆ ಪುನರ್ ಸ್ಥಾಪಿಸಿ ಅವರ ಸೇವೆಯನ್ನು ಅವರ ಮಾತೃ ಇಲಾಖೆಯಾದ ಆರ್ಥಿಕ ಇಲಾಖೆಗೆ ಹಿಂದಿರುಗಿಸಲಾಗಿದೆ.

---2

ಶ್ರೀ ಶಂಕರಚಾರಿ, ಹಣಕಾಸು ಅಧೀಕ್ಷಕ ಇವರು ಮೇಲೆ ಓದಲಾದ ಕ್ರಮಾಂಕ (5) ರಲ್ಲಿ ಮನವಿ ಸಲ್ಲಿಸಿ, ತಮ್ಮ ಅಮಾನತ್ತನ್ನು ತೆರವುಗೊಳಿಸುವಂತೆ ಕೋರಿದ್ದರ ಕುರಿತು ಅಭಿಪ್ರಾಯ ನೀಡಲು ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಐ.ಡಿ.ಎಲ್ ಇವರನ್ನು ಕೋರಲಾಗಿತ್ತು. ಮೇಲೆ ಓದಲಾದ ಕ್ರಮಾಂಕ (6) ರಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಐ.ಡಿ.ಎಲ್ ಇವರು ಅಭಿಪ್ರಾಯ ನೀಡಿ, ಈ ಪ್ರಕರಣದಲ್ಲಿ ಶಂಕರಚಾರಿ ಇವರನ್ನು ಒಳಗೊಂಡಂತೆ ಡಾ:ವೀರನಗೌಡ ಪಾಟೀಲ್, ಹಿಂದಿನ ಮುಖ್ಯ ಹಣಕಾಸು ಅಧಿಕಾರಿ ಮತ್ತು ಶ್ರೀ ಪ್ರಶಾಂತ್ ಕುಮಾರ್ ಎಂ.ವಿ. ಉಪ ಹಣಕಾಸು ಅಧಿಕಾರಿ ಇವರ ವಿರುದ್ಧದ ಆರೋಪಗಳು ಒಂದೇಯಾಗಿದ್ದು ಈಗಾಗಲೇ ಶ್ರೀ ಶಂಕರಚಾರಿ ಇವರನ್ನು ಹೊರತುಪಡಿಸಿ ಉಳಿದ ಇಬ್ಬರು ಅಧಿಕಾರಿಗಳ ಅಮಾನತ್ತನ್ನು ತೆರವುಗೊಳಿಸಿರುವುದರಿಂದ ಶ್ರೀ ಶಂಕರಚಾರಿ ಇವರ ಅಮಾನತ್ತನ್ನು ತೆರವುಗೊಳಿಸುವ ಬಗ್ಗೆ ಸರ್ಕಾರದ ವತಿಯಿಂದಲೇ ಕ್ರಮವಹಿಸಬಹುದಾಗಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿರುತ್ತಾರೆ.

ಪ್ರಸ್ತುತ ಶ್ರೀ ಶಂಕರಚಾರಿ ಇವರನ್ನು ಅಮಾನತ್ತುಗೊಳಿಸಿ ಈಗಾಗಲೇ 10 ತಿಂಗಳಿಗಿಂತ ಹೆಚ್ಚಿನ ಅವಧಿ ಕಳೆದಿದ್ದು, ಸದರಿಯವರ ಜೊತೆ ಅಮಾನತ್ತುಗೊಂಡಿದ್ದ ಇಬ್ಬರು ಅಧಿಕಾರಿಗಳ ಅಮಾನತ್ತನ್ನು ಈಗಾಗಲೇ ತೆರವುಗೊಳಿಸಿರುವುದರಿಂದ ಶ್ರೀ ಶಂಕರಚಾರಿ, ಅಧೀಕ್ಷಕರು ಇವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಕೈಗೊಳ್ಳಬಹುದಾದ ಕ್ರಮಗಳನ್ನು ಬಾಕಿ ಇರಿಸಿ, ಅವರ ಅಮಾನತ್ತನ್ನು ತೆರವುಗೊಳಿಸಲು ಸರ್ಕಾರವು ನಿರ್ಧರಿಸಿರುತ್ತದೆ. ಆದ್ದರಿಂದ ಈ ಆದೇಶ.

**ಆದೇಶ ಸಂಖ್ಯೆ:ಗ್ರಾಅಪ 506 ಜಿಪಅ 2017, ಬೆಂಗಳೂರು, ದಿನಾಂಕ:29.9.2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಪ್ರಸ್ತುತ ಅಮಾನತ್ತಿನಲ್ಲಿರುವ ಶ್ರೀ ಶಂಕರಚಾರಿ, ಅಧೀಕ್ಷಕ, ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಯಮಿತದ ನೌಕರ ಇವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಕೈಗೊಳ್ಳಬಹುದಾದ ಕ್ರಮಗಳನ್ನು ಬಾಕಿ ಇರಿಸಿ, ತಕ್ಷಣದಿಂದ ಜಾರಿಗೆ ಬರುವಂತೆ ಅವರ ಅಮಾನತ್ತನ್ನು ತೆರವುಗೊಳಿಸಿ, ಸೇವೆಗೆ ಪುನರ್ ಸ್ಥಾಪಿಸಿದೆ.

ಸದರಿಯವರು ಅಮಾನತ್ತುಗೊಳಿಸುವ ಸಂದರ್ಭದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಹುದ್ದೆಯನ್ನು ಹೊರತುಪಡಿಸಿ, ಬೇರೆಡೆ ಸ್ಥಳನಿಯುಕ್ತಿಗೊಳಿಸಲು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರಿಗೆ ಸೂಚಿಸಿದೆ.

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ರಂಗನಗೌಡ) 29/09/2018
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ವಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು,(ಲೆಕ್ಕ ಪತ್ರ 1&2)/(ಆಡಿಟ್) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಯಮಿತ, ಬೆಂಗಳೂರು.
4. ಶ್ರೀ ಶಂಕರಚಾರಿ, ಅಧೀಕ್ಷಕರು, ವನವಿಕಾಸ, ಮಲ್ಲೇಶ್ವರಂ, ಬೆಂಗಳೂರು.
5. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ವಿಶೇಷ ಕರ್ತವ್ಯಾಧಿಕಾರಿಯವರು.
6. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ ಇವರ ಆಪ್ತ ಕಾರ್ಯದರ್ಶಿ.
7. ನಿರ್ದೇಶಕರು, ಸುಗ್ರಾಯೋ, ಗ್ರಾ.ಅ.ಪಂ.ರಾಜ್ ಇಲಾಖೆ.
8. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ.ಪಂ.ರಾಜ್ ಇಲಾಖೆ.
9. ಶಾಖಾ ರಕ್ಷಾ ಕಡತ/ಕಂಪ್ಯೂಟರ್ ಸೆಲ್/ ಹೆಚ್ಚುವರಿ ಪ್ರತಿ.